ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12.

ದಿನಾಂಕ: 16-08-2018

ಪಪೂಶಿ/ಶೈಶಾ.04/ದಾ.ವೇ.ಶೈ.ಜ/11/2018-19

**ಸುತ್ತೋಲೆ**

ವಿಷಯ: ರಾಜ್ಯದ ಸರ್ಕಾರಿ, ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಪಿಯುಸಿ ತರಗತಿಗೆ ದಾಖಲಾತಿ ದಿನಾಂಕವನ್ನು ವಿಸ್ತರಿಸುವ ಬಗ್ಗೆ.

ಉಲ್ಲೇಖ: ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿ.

****

2018-19ನೇ ಶೈಕ್ಷಣಿಕ ಸಾಲಿಗೆ ಎಸ್.ಎಸ್.ಎಲ್.ಸಿ/10ನೇ ತರಗತಿ ಪೂರಕ ಪರೀಕ್ಷೆ ಹಾಗೂ ಮರುಮೌಲ್ಯಮಾಪನದಲ್ಲಿ ಉತ್ತೀರ್ಣರಾದ ಪ್ರಥಮ ಪಿಯುಸಿ ತರಗತಿಗೆ ದಾಖಲಾಗಲು ವಿದ್ಯಾರ್ಥಿಗಳಿಗೆ ದಂಡಶುಲ್ಕವಿಲ್ಲದೆ ಹತ್ತಿರದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ದಾಖಲಾತಿಗೆ ದಿನಾಂಕ: 25-08-2018ರವರೆಗೆ ಅನುಮತಿ ನೀಡಿ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ದಿನಾಂಕವನ್ನು ವಿಸ್ತರಿಸಿ ಆದೇಶಿಸಲಾಗಿದೆ.

ವಿಶೇಷ ಸೂಚನೆ:- ಸೂಚಿತ ದಿನಾಂಕಗಳಲ್ಲಿ ದಾಖಲಾಗುವ ಪ್ರಥಮ ಪಿಯುಸಿ ವಿದ್ಯಾರ್ಥಿಗಳು ಈ ಶೈಕ್ಷಣಿಕ ವರ್ಷದಲ್ಲಿ ವಾರ್ಷಿಕ ಶೇ 75 ರಷ್ಟು ಹಾಜರಾತಿಯನ್ನು ಪಡೆಯುವ ಬಗ್ಗೆ ವಿದ್ಯಾರ್ಥಿಗಳಿಂದ ಮುಚ್ಚಳಿಕೆಯನ್ನು ಕಡ್ಡಾಯವಾಗಿ ಪಡೆದು ದಾಖಲಾತಿಯನ್ನು ನೀಡುವುದು. ಸದರಿ ವಿದ್ಯಾರ್ಥಿಗಳಿಗೆ ರಜಾ ದಿನಗಳಲ್ಲಿ ಹಾಗೂ ಭಾನುವಾರಗಳಲ್ಲಿ ವಿಶೇಷ ತರಗತಿಗಳನ್ನು ನಡೆಸಿ ಇಲ್ಲಿಯವರೆಗೆ ನಷ್ಟವಾಗಿರುವ ಪಾಠಗಳನ್ನು ಸರಿದೂಗಿಸಲು ತಿಳಿಸಿದೆ.

(ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ)

16/8/18

ಜಂಟಿ ನಿರ್ದೇಶಕರು (ಶೈಕ್ಷಣಿಕ),
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ- ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಲು ಸೂಚಿಸಿದೆ.
2. ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ- ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರ ಮೂಲಕ.
3. ನಿರ್ದೇಶಕರ ಆಪ್ತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ಮಾಹಿತಿಗಾಗಿ.
4. ಇ-ಆಡಳಿತ ಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ, ವೆಬ್‌ಸೈಟ್‌ನಲ್ಲಿ ಅಳವಡಿಸಲು ಮುಂದಿನ ಕ್ರಮಕ್ಕಾಗಿ.
5. ಕಛೇರಿ ಪ್ರತಿ.